# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 477(425) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಎಸ್.ವಿ.ಸಂಕನೂರ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 15-09-2022 |
| ಉತ್ತರಿಸುವವರು | : | ಮಾನ್ಯ ಮುಖ್ಯ ಮಂತ್ರಿಯವರು. |

<table>
<tr><th>ಕ್ರ. ಸಂ.</th><th>ಪ್ರಶ್ನೆಗಳು</th><th>ಉತ್ತರ</th></tr>
<tr><td>(ಅ)</td><td>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗದಲ್ಲಿ ಅಧ್ಯಯನ ಮಾಡಿರುವ/ಮಾಡುತ್ತಿರುವ MA, (RDPR) ವಿದ್ಯಾರ್ಥಿಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಉದ್ಯೋಗ ನೀಡಲು ಉನ್ನತ ಮಟ್ಟದ ಅಧಿಕಾರಿಗಳ ಸಮಿತಿ ರಚನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಯಾವ ದಿನಾಂಕದಂದು ರಚನೆಯಾಗಿದೆ;</td><td>ಹೌದು.<br>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 293 ಜಿಪಸ 2021, ದಿನಾಂಕ:04-10-2021ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡಂತೆ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ.
<table>
<tr><td>1.</td><td>ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ</td><td>ಅಧ್ಯಕ್ಷರು</td></tr>
<tr><td>2.</td><td>ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ</td><td>ಸದಸ್ಯರು</td></tr>
<tr><td>3.</td><td>ಆಯುಕ್ತರು, ಗ್ರಾಮೀಣಾಭಿವೃದ್ಧಿ</td><td>ಸದಸ್ಯರು</td></tr>
<tr><td>4.</td><td>ವ್ಯವಸ್ಥಾಪಕ ನಿರ್ದೇಶಕರು, ರಾಜ್ಯ ಗ್ರಾಮೀಣ ಜೀವನೋಪಾಯ ಮಿಷನ್</td><td>ಸದಸ್ಯರು</td></tr>
<tr><td>5.</td><td>ಉಪಕುಲಪತಿಗಳು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ</td><td>ಸದಸ್ಯ</td></tr>
<tr><td>6.</td><td>ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ</td><td>ಸದಸ್ಯ ಕಾರ್ಯದರ್ಶಿ</td></tr>
</table>
</td></tr>
</table>

| | | |
|---|---|---|
| (ಆ) | ಈ ಸಮಿತಿಯು ಇದುವರೆಗೆ ಎಷ್ಟು ಸಭೆಗಳನ್ನು ನಡೆಸಿದೆ;(ಮಾಹಿತಿ ನೀಡುವುದು) | ದಿನಾಂಕ:17-02-2022ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ಸಭೆಯನ್ನು ನಡೆಸಲಾಗಿದೆ. |
| (ಇ) | ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿರುವುದೇ? (ವಿವರ ನೀಡುವುದು) | ದಿನಾಂಕ:17-02-2022ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಮಿತಿ ಸಭೆಯ ನಡವಳಿಯನ್ವಯ ಈ ಕೆಳಕಂಡಂತೆ ಕ್ರಮ ಜರುಗಿಸಲಾಗಿದೆ.<br>➢ ವಿವಿಧ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳಿಗೆ ಆಯಾ ಇಲಾಖೆಗಳಲ್ಲಿನ ನೇಮಕಾತಿಗಳಲ್ಲಿ (ಗುತ್ತಿಗೆ/ಹೊರ ಗುತ್ತಿಗೆ) ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಪದವೀಧರರನ್ನು ಪರಿಗಣಿಸುವಂತೆ ಪತ್ರವನ್ನು ಬರೆಯಲಾಗಿದೆ.<br>➢ ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳಿಗೆ ವ್ಯಕ್ತಿತ್ವ ವಿಕಸನ, Resume Writing ಕುರಿತು ಹಾಗೂ ಇನ್ನಿತರೆ ಪೂರಕ ವಿಷಯಗಳಿಗೆ ಸಂಬಂಧಪಟ್ಟಂತೆ ಕಾಲ ಕಾಲಕ್ಕೆ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿವಿಧ ತರಗತಿಗಳನ್ನು ಜರುಗಿಸಲಾಗುತ್ತಿದೆ.<br>➢ ನೈಪುಣ್ಯ ಕೇಂದ್ರದ ಉದ್ಯೋಗ ಕೋಶವು, ವಿದ್ಯಾರ್ಥಿಗಳನ್ನು ವಿವಿಧ ನೇಮಕಾತಿಗಳಲ್ಲಿ ಯಶಸ್ವಿಯಾಗಿ ಹೊರಹೊಮ್ಮುವ ದೃಷ್ಟಿಯಿಂದ ಮೊದಲನೇ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಜೀವನ ಕೌಶಲ್ಯ ಮತ್ತು ಎಲ್ಲಾ ಹತ್ತು ಕಾರ್ಯಕ್ರಮಗಳ, ಅಂತಿಮ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಉದ್ಯೋಗ ಕೌಶಲ್ಯಗಳ ಕುರಿತು ನಿಯಮಿತ ತರಗತಿಗಳನ್ನು ನಡೆಸಲಾಗುತ್ತಿದೆ.<br>➢ 21ನೇ ಜೂನ್ 2022 ರಂದು, MYRADA ಸಂಸ್ಥೆಯು ಕ್ಯಾಂಪಸ್ ಪ್ಲೇಸ್‌ಮೆಂಟ್‌ಗಾಗಿ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿದ್ದು, ಕಾರ್ಯಕ್ರಮಗಳಲ್ಲಿ ಒಟ್ಟು 19 ವಿದ್ಯಾರ್ಥಿಗಳು ಭಾಗವಹಿಸಿದ್ದು, ಸದರಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |

| | | |
|---|---|---|
| | | ➤ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ (NRLM) ಅಡಿಯಲ್ಲಿ ಒಟ್ಟು 140 ವಿದ್ಯಾರ್ಥಿಗಳು ಯುವ ವೃತ್ತಿಪರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ್ದು, ಅದರಲ್ಲಿ 98 ವಿದ್ಯಾರ್ಥಿಗಳು ಸಂದರ್ಶನಕ್ಕೆ ಆಯ್ಕೆಯಾಗಿರುತ್ತಾರೆ. 22 ಮತ್ತು 23ನೇ ಜುಲೈ 2022 ರಂದು ನಡೆದ ಮೊದಲ ಹಂತದ ಸಂದರ್ಶನದಲ್ಲಿ 49 ವಿದ್ಯಾರ್ಥಿಗಳನ್ನು ಸಂದರ್ಶಿಸಲಾಗಿದ್ದು, ಎರಡನೇ ಹಂತದ ಸಂದರ್ಶನವನ್ನು ನಿಗದಿತ ಸಮಯದಲ್ಲಿ ನಡೆಸಲು ನಿರ್ಧರಿಸಲಾಗಿದೆ ಮತ್ತು ಅದರ ಫಲಿತಾಂಶಗಳನ್ನು ನಿರೀಕ್ಷಿಸಲಾಗುತ್ತದೆ.<br>➤ ಎಮ್.ಡಿ.ಎಮ್.ಎಸ್. ಯೋಜನೆಗೆ ಸಂಬಂಧಪಟ್ಟಂತೆ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸಹಯೋಗದೊಂದಿಗೆ ವಿಶ್ವವಿದ್ಯಾಲಯದಿಂದ ಹಮ್ಮಿಕೊಳ್ಳಲಾದ ಮೌಲ್ಯ ಮಾಪನ ಕಾರ್ಯಕ್ರಮದಲ್ಲಿ, ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳ ಸೇವೆಯನ್ನು ಬಳಸಿಕೊಂಡು ಸಂಬಂಧಪಟ್ಟ ಇಲಾಖೆಗೆ ವರದಿ ಸಲ್ಲಿಸಲಾಗಿರುತ್ತದೆ.<br>➤ ಅಮೃತ್ ಗ್ರಾಮ ಪಂಚಾಯತ್ ಯೋಜನೆಯನ್ನು ಅನುಷ್ಠಾನ ಮಾಡಿರುವ ಗ್ರಾಮ ಪಂಚಾಯತಿಗಳ ಮೌಲ್ಯ ಮಾಪನ ಕಾರ್ಯದಲ್ಲಿ ವಿಶ್ವ ವಿದ್ಯಾಲಯದಿಂದ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದೆ.<br>➤ ಸೆಪ್ಟೆಂಬರ್ 29 ಮತ್ತು 30ನೇ 2022 ರಂದು, ವಿಶ್ವವಿದ್ಯಾಲಯ ಕ್ಯಾಂಪಸ್‌ನಲ್ಲಿ ದೊಡ್ಡ ಕ್ಯಾಂಪಸ್ ಡ್ರೈವ್ ಅನ್ನು ಆಯೋಜಿಸಲಾಗಿದ್ದು, ಸುಮಾರು 20 ಕ್ಕೂ ಹೆಚ್ಚು ಸಂಸ್ಥೆಗಳು ಭಾಗವಹಿಸುವುದಾಗಿ ಈಗಾಗಲೇ ಧೃಡೀಕರಿಸಿವೆ. |

**ಸಂಖ್ಯೆ: ಗ್ರಾಅಪಂರಾ 412 ಜಿಪಸ 2022**

**(ಬಸವರಾಜ ಬೊಮ್ಮಾಯಿ)**

ಮುಖ್ಯ ಮಂತ್ರಿ